ನೋಂದಣಿ, ಆಡಳಿತ ಸಹಾಯಾನುದಾನ ಇತ್ಯಾದಿ) ನಿಯಮಗಳು 2006 ರ ನಿಯಮ 15ಕ್ಕೆ ತಿದ್ದುಪಡಿ ಮಾಡಿ, ಅನುದಾನಿತ ಪದವಿ ಪೂರ್ವ ಕಾಲೇಜಿನಲ್ಲಿ ಅನುಕಂಪದ ಆಧಾರದ ಮೇಲೆ ನೇಮಕಾತಿಗೆ ಬೋಧಕೇತರ ಖಾಲಿ ಹುದ್ದೆ ಲಭ್ಯವಿಲ್ಲದಿದ್ದಲ್ಲಿ ಬೇರೊಂದು ಅನುದಾನಿತ ಕಾಲೇಜಿನಲ್ಲಿ ಲಭ್ಯವಿರುವ ಬೋಧಕೇತರ ಖಾಲಿ ಹುದ್ದೆಗೆ ನೇಮಕಾತಿ ಅವಕಾಶ ಕಲ್ಪಿಸಲಾಗಿದೆ.

ಕಾಲೇಜು ಸ್ಥಾಪನೆಯ ಬಗ್ಗೆ

82 (298): ಶ್ರೀ ಬಸವರಾಜ ಪಾಟೀಲ್ ಅಟ್ಟೂರು (ಬಸವಕಲ್ಯಾಣ): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬಸವಕಲ್ಯಾಣ ಮತ ಕ್ಷೇತ್ರಕ್ಕೆ ಕಳೆದ ಶೈಕ್ಷಣಿಕ ವರ್ಷದಲ್ಲಿ ಎಷ್ಟು ಪದವಿ ಕಾಲೇಜುಗಳನ್ನು ಯಾವ ಯಾವ ಸ್ಥಳಗಳಿಗೆ ಮಂಜೂರು ಮಾಡಲಾಗಿದೆ;

ಆ) ಈ ಪೈಕಿ ಎಷ್ಟು ಪದವಿ ಕಾಲೇಜುಗಳನ್ನು ಪ್ರಾರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಇದಕ್ಕಾಗಿ ಎಲ್ಲೆಲ್ಲಿ ನಿವೇಶನಗಳನ್ನು ತೆಗೆದುಕೊಳ್ಳಲಾಗಿದೆ;

ಇ) ಈ ಕ್ಷೇತ್ರಕ್ಕೆ ಮಂಜೂರಾಗಿರುವ ಪದವಿ ಕಾಲೇಜನ್ನು ನಿವೇಶನ ದೊರಕಿಲ್ಲವೆಂಬ ಕಾರಣ ನೀಡಿ ಬೇರೆ ಸ್ಥಳಕ್ಕೆ ವರ್ಗಾವಣೆ ಮಾಡಿರುವುದು ನಿಜವೇ? (ವಿವರ ನೀಡುವುದು);

ಈ) ಹಾಗಿದ್ದಲ್ಲಿ, ಮೇಲ್ಕಂಡ ಪದವಿ ಕಾಲೇಜಿಗೆ ನಿವೇಶನಕ್ಕಾಗಿ ಈಗಾಗಲೇ ಸರ್ಕಾರಿ ಜಾಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಬಸವಕಲ್ಯಾಣಕ್ಕೆ ಮಂಜೂರಾಗಿರುವ ಪದವಿ ಕಾಲೇಜನ್ನು ಪ್ರಾರಂಭಿಸಲು ಇರುವ ತೊಂದರೆಗಳೇನು? (ವಿವರ ನೀಡುವುದು);

ಶ್ರೀ ವಿ.ಎಸ್. ಆಚಾರ್ಯ (ಉನ್ನತ ಶಿಕ್ಷಣ ಸಚಿವರು):

ಅ) ಮಂಜೂರು ಮಾಡಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಹೌದು. ಸದರಿ ಕಾಲೇಜಿನ ಕಟ್ಟಡ ಕಾಮಗಾರಿಗೆ ನಿವೇಶನ ದೊರಕಿಲ್ಲದಿರುವುದರಿಂದ ನಬಾರ್ಡ್ ಹೈ-ಪವರ್ ಕಮಿಟಿ ಸಭೆಯಲ್ಲಿ

ತೀರ್ಮಾನಿಸಿ ನಿವೇಶನ ಲಭ್ಯವಿಲ್ಲದ ಕಾಲೇಜಿಗೆ ಮಂಜೂರಾಗಿರುವ ಅನುದಾನ ಲ್ಯಾಪ್ಸ್ ಆಗುವುದರಿಂದ ನಿವೇಶನ ಲಭ್ಯವಿರುವ ಕಾಲೇಜಿಗೆ ವರ್ಗಾವಣೆ ಮಾಡಲಾಗಿದೆ.

ಈ) ಈವರೆವಿಗೂ ನಿವೇಶನ ದೊರಕಿರುವುದಿಲ್ಲ. ನಿವೇಶನ ದೊರಕಿಸಿಕೊಳ್ಳಲು ಕ್ರಮ ವಹಿಸಲಾಗಿದ್ದು, ನಿವೇಶನ ದೊರೆತ ತಕ್ಷಣ ಅನುದಾನದ ಲಭ್ಯತೆ ಆಧರಿಸಿ ಕಟ್ಟಡ ಕಾಮಗಾರಿಗೆ ಅನುದಾನ ಬಿಡುಗಡೆ ಮಾಡಲಾಗುವುದು.

ರಸ್ತೆ ನಿರ್ಮಾಣದ ಬಗ್ಗೆ

83 (299): ಶ್ರೀ ಬಸವರಾಜ ಪಾಟೀಲ್ ಅಟ್ಟೂರು (ಬಸವಕಲ್ಯಾಣ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬಸವಕಲ್ಯಾಣ ಮತಕ್ಷೇತ್ರದಲ್ಲಿ ಬರುವ ಬಹುತೇಕ ವಾಡಿ ಮತ್ತು ತಾಂಡಾಗಳಿಗೆ ರಸ್ತೆಯ ಸೌಲಭ್ಯ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ವಿವರ ಒದಗಿಸುವುದು);

ಆ) ಹಾಗಿದ್ದಲ್ಲಿ, ಎರಡೂವರೆ ವರ್ಷಗಳ ಅವಧಿಯಲ್ಲಿ ಈ ಕ್ಷೇತ್ರದಲ್ಲಿ ವಾಡಿ ಮತ್ತು ತಾಂಡಾಗಳಿಗೆ ರಸ್ತೆ ನಿರ್ಮಿಸಲು ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ. ಎಷ್ಟೆಷ್ಟು ಕಿ.ಮೀ. ರಸ್ತೆಗಳನ್ನು ನಿರ್ಮಿಸಲಾಗಿದೆ.

ಇ) 2010–11 ನೇ ಸಾಲಿನಲ್ಲಿ ಈ ಕ್ಷೇತ್ರದ ಯಾವ ಯಾವ ವಾಡಿ ಮತ್ತು ತಾಂಡಾಗಳಲ್ಲಿ ಎಷ್ಟೆಷ್ಟು ಕಿ.ಮೀ ರಸ್ತೆಗಳನ್ನು ನಿರ್ಮಾಣ ಮಾಡಲಾಗುತ್ತಿದೆ ಮತ್ತು ಇದಕ್ಕಾಗಿ ವೆಚ್ಚ ಮಾಡಲಾಗುತ್ತಿರುವ ಹಣವೆಷ್ಟು?

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ) ಬಂದಿದೆ.